# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1043 |
| ಸದಸ್ಯರ ಹೆಸರು | ಶ್ರೀ ಆರ್ ಬಿ ತಿಮ್ಮಾಪೂರ |
| ಉತ್ತರಿಸುವ ದಿನಾಂಕ | 22-12-2021 |
| ಉತ್ತರಿಸುವವರು | ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯಾದ್ಯಂತ ಇರುವ ದೇವಸ್ಥಾನಗಳಲ್ಲಿ ಕೆಲವು ದೇವಸ್ಥಾನಗಳು ಪರಿಶಿಷ್ಟ ಜಾತಿ ಮತ್ತು ವರ್ಗದ ಜನರಿಗೆ ಪ್ರವೇಶ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ದೇವಾಲಯಗಳಲ್ಲಿ ಪರಿಶಿಷ್ಟ ಜಾತಿ ಮತ್ತು ವರ್ಗದ ಜನರಿಗೆ ಪ್ರವೇಶ ಕಲ್ಪಿಸದಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಆ | ಬಂದಿದ್ದಲ್ಲಿ, ಈ ಸಂಬಂಧ ಪ್ರವೇಶಾವಕಾಶ ಒದಗಿಸುವಂತೆ ಸುತ್ತೋಲೆ ಹೊರಡಿಸಲಾಗಿದೆಯೇ; | ಭಾರತದ ಸಂವಿಧಾನದ ಸಾಮಾಜಿಕ ಆಶಯಗಳು ಈಡೇರಬೇಕಾದ ಹಿನ್ನೆಲೆಯಲ್ಲಿ ಇಲಾಖೆಗೆ ಒಳಪಡುವ ಪ್ರತಿಯೊಂದು ದೇವಾಲಯದ ಮುಖ್ಯ ದ್ವಾರದಲ್ಲಿ **"ಯಾವುದೇ ಜಾತಿ, ಜನಾಂಗ, ಧರ್ಮ, ಲಿಂಗಭೇದವಿಲ್ಲದೇ ದೇವರ ದರ್ಶನಕ್ಕೆ ಮುಕ್ತ ಪ್ರವೇಶ"** ಎನ್ನುವ ನಾಮಫಲಕವನ್ನು ಅಳವಡಿಸಲು ಸೂಚಿಸಿ ಧಾರ್ಮಿಕ ದತ್ತಿ ಆಯುಕ್ತರ ಕಛೇರಿಯಿಂದ ದಿನಾಂಕ:26.10.2016ರಂದು ಸುತ್ತೋಲೆ ಹೊರಡಿಸಲಾಗಿದೆ. |
| ಇ | ಪ್ರವೇಶಾವಕಾಶ ಕಲ್ಪಿಸದ ದೇವಸ್ಥಾನಗಳೊಂದಿಗೆ ಚರ್ಚಿಸಿ, ಮುಕ್ತ ಪ್ರವೇಶ ಕಲ್ಪಿಸಲು ಕ್ರಮ ವಹಿಸಲಾಗುವುದೇ? | ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ದೇವಾಲಯಗಳಲ್ಲಿ ದಿನಾಂಕ:26.10.2016ರ ಸುತ್ತೋಲೆಯನ್ವಯ ಈಗಾಗಲೇ ಸರ್ವರಿಗೂ ಮುಕ್ತ ಪ್ರವೇಶ ಕಲ್ಪಿಸಲಾಗಿರುವುದರಿಂದ ಪ್ರವೇಶಾವಕಾಶ ಕಲ್ಪಿಸದ ದೇವಸ್ಥಾನ ಕುರಿತಂತೆ ಯಾವುದೇ ದೂರು ಬಂದಿರುವುದಿಲ್ಲ. |

ಸಂಖ್ಯೆ: ಕಂಇ 272 ಮುಸಪ್ರ 2021

**(ಶಶಿಕಲಾ. ಅ. ಜೊಲ್ಲೆ)**

**ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವರು**